ಓ.ಎಸ್ಃ 364-2008

ಡಿ. ಡಬ್ಲ್ಯೂ ಃ 07

**<u>ಸಾಕ್ಷಿಗೆ ದಿನಾಂಕ 06.12.2021 ರಂದು ಪ್ರಮಾಣ ವಚನ ನೀಡಲಾಯಿತು.</u>**

**<u>ಪಾಟೀಸವಾಲುಃ ವಾದಿ ಪರ ವಕೀಲರಿಂದ</u>**

ನನಗೆ ವಾದಿ ಹಾಗೂ 1 ರಿಂದ 7ನೇ ಪ್ರತಿವಾದಿ ಹಾಗೂ ಅವರ ಕುಟುಂಬದ ಪರಿಚಯವಿರುತ್ತದೆ. ನನ್ನ ಕ್ರಯದಾರರಾದ ಮೃತ ನಾಗರಾಜು ರವರಿಗೆ ನಾನು ಖರೀದಿಸಿರುವ ಸ್ವತ್ತು ಅವರ ತಂದೆ ಮನೆಯಿಂದ ವಿಭಾಗ ಪತ್ರದ ಮೂಲಕ ಬಂದಿರುತ್ತದೆ. ನಾನು ಸದರಿ ವಿಭಾಗ ಪತ್ರವನ್ನು ನೋಡಿಲ್ಲ. ಮೃತ ನಾಗರಾಜು ರವರು ತಮ್ಮ ಕುಟುಂಬದ ಖರ್ಚಿಗಾಗಿ ನಿಡಿ 38 ರ ಸ್ವತ್ತನ್ನು ನನಗೆ ಮಾರಾಟ ಮಾಡಿರುತ್ತಾರೆ. ವಾದಿ ನಾಗರಾಜು ರವರ ಅಕ್ಕ ಎಂದರೆ ಸರಿ. ನಾನು ಕ್ರಯಕ್ಕೆ ಪಡೆದುಕೊಂಡ ಸ್ವತ್ತಿನಲ್ಲಿ ವಾದಿಗೂ ಸಹಾ ಭಾಗಾಂಶ ಇದೆ ಎಂದರೆ ಸರಿಯಲ್ಲ. ಸಾಕ್ಷಿಯು ನಾನು ಕ್ರಯಕ್ಕೆ ಪಡೆದುಕೊಳ್ಳುವಾಗ ವಾದಿ ಬೇರೆ ವಾಸವಿದ್ದರು ಎಂದು ನುಡಿಯುತ್ತಾರೆ. ವಾದಿಗೆ ಮೋಸ ಮಾಡುವ ಉದ್ದೇಶದಿಂದ ನಾಗರಾಜು ರವರ ಜೊತೆ ಸೇರಿಕೊಂಡು ಸದರಿ ಸ್ವತ್ತನ್ನು ಕ್ರಯಕ್ಕೆ ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ನಾಗರಾಜು ರವರಿಗೆ ಸ್ವತ್ತನ್ನು ಮಾರಾಟ ಮಾಡುವ ಯಾವುದೇ ಅಧಿಕಾರವಿರಲಿಲ್ಲ ಎಂದರೆ ಸರಿಯಲ್ಲ. ವಾದಿಗೆ ಭಾಗಾಂಶ ನೀಡಬೇಕಾಗುತ್ತದೆ ಎಂಬ ದುರುದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಅಪರ ಸಿವಿಲ್ ಜಡ್ಜ್ ಮತ್ತು ಜೆಎಂಎಫ್.ಸಿ
ಶ್ರೀರಂಗಪಟ್ಟಣ